ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಿನಾಂಕ: 20-09-2019ರ ಆದೇಶದನ್ವಯ ಮಾನ್ಯ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆ"ಯಡಿ ಕೈಗೊಳ್ಳಲು ಉದ್ದೇಶಿಸಿರುವ "Upgradation of Musical Fountain and other developmental works in Kempegowda Park in ward No. 04 of Yelahanka Satellite town sub Division" (ಅನುಬಂಧ-6ರ ಕ್ರಮ ಸಂಖ್ಯೆ: 249) ಕಾಮಗಾರಿಯ ರೂ.1.00 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019.

2. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಮುಖ್ಯ ಆಯುಕ್ತರು/ಪ.ಆರ್(ಜಿ)/3294/2021-22, ದಿನಾಂಕ: 14-01-2022 / 19-01-2022.

3. ಸರ್ಕಾರದ ಸಮಸಂಖ್ಯೆಯ ಪತ್ರ ದಿನಾಂಕ: 19-02-2022.

4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಬಿಬಿಎಂಪಿ/ಮು.ಆ/ಪಿಆರ್(G)/3294/2022-23, ದಿನಾಂಕ: 30-05-2022 / 07-06-2022.

5. ದಿನಾಂಕ: 08-07-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

• • • • •

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 20-09-2019ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 01-02-2019 ರಂತೆ ಅನುಮೋದಿಸಿದ್ದ, "ಮುಖ್ಯಮಂತ್ರಿಗಳ ನವ ಬೆಂಗಳೂರು ಯೋಜನೆ"ಯನ್ನು ರದ್ದುಪಡಿಸಿ ಪರ್ಯಾಯವಾಗಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಲಾಗಿದ್ದು, ಸದರಿ ಆದೇಶದ ಅನುಬಂಧ-6ರ ಕ್ರಮ ಸಂಖ್ಯೆ: 249ರ "Upgradation of Musical Fountain and other development works in Kempegowda Park in ward No. 04 of Yelahanka Satellite town sub division" ಕಾಮಗಾರಿಗೆ ಒಟ್ಟು ರೂ.1.00 ಕೋಟಿ ಅನುದಾನ ನಿಗಧಿಪಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 14-01-2022 / 19-01-2022ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019 ರಲ್ಲಿ 2018-19, 2019-20 ಮತ್ತು 2020-21ನೇ ಸಾಲಿನ ಮಾನ್ಯ "ಮುಖ್ಯಮಂತ್ರಿಗಳ ನವ ನಗರೋತ್ಥಾನ ಯೋಜನೆಯಡಿ"ಯಲ್ಲಿ ಒದಗಿಸಿರುವ ರೂ.8015.37 ಕೋಟಿಗಳ ಅನುದಾನದಲ್ಲಿ ವಿವಿಧ ಅನುಬಂಧಗಳಲ್ಲಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019ರ ಕ್ರಿಯಾ ಯೋಜನೆ ಅನುಬಂಧ-06ರ ಪ-3748 (CM Nava Nagarothana – Buildings parks, Playgrounds, Hospital and other Works) ಯೋಜನೆಯಡಿ ಕ್ರಮ ಸಂಖ್ಯೆ: 249 ರಲ್ಲಿ ಈ ಕಾಮಗಾರಿಗಳಿಗೆ "Upgradation

. . .2/-

of Musical Fountain and other developmental works in Kempegowda Park in ward No. 04 of Yelahanka Satellite town sub Division" ಕಾಮಗಾರಿಗಳ ಮೊತ್ತ ರೂ.100.00 ಲಕ್ಷಗಳಿಗೆ ಜಾಬ್ ಸಂಕ್ಯೆಯನ್ನು ಪಡೆಯಲಾಗಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ಪೈ 2018, ದಿನಾಂಕ: 20-09-2019ರ ಕ್ರಿಯಾ ಯೋಜನೆ ಅನುಬಂಧ-06ರ ಕ್ರಮ ಸಂಖ್ಯೆ: 249 ರಲ್ಲಿ ಲಭ್ಯವಿರುವ ಅನುದಾನಕ್ಕೆ ಅನುಗುಣವಾಗಿ ಟೆಂಡರ್‌ನ್ನು ಯಲಹಂಕ ವಲಯ, ಯೋಜನಾ ವಿಭಾಗ ಕಛೇರಿಯಿಂದ ಟೆಂಡರ್ ಸಂಖ್ಯೆ: BBMP/YNK/EE(Project)/ TEND/06/2021-22, Date: 17-08-2021 ರಂತೆ ದ್ವಿಲಕೋಟಿ ಪದ್ಧತಿಯಲ್ಲಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ರೂ.96.12 ಲಕ್ಷಗಳಿಗೆ (ಟೆಂಡರ್‌ಗಿಟ್ಟ ಮೊತ್ತ) ಟೆಂಡರ್ ಆಹ್ವಾನಿಸಲಾಗಿರುತ್ತದೆ.

ಸದರಿ ಕಾಮಗಾರಿಯ ತಾಂತ್ರಿಕ ಬಿಡ್‌ನ್ನು ದಿನಾಂಕ: 07-09-2021 ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ Sri Vinay Kumar M (Vinay Enterprises) ಮತ್ತು Sri Avanihaker Nagaraja Madhusudhan (Suraksha Electricals) ರವರು ಭಾಗವಹಿಸಿದ್ದು, ಸದರಿ ಇಬ್ಬರೂ ಗುತ್ತಿಗೆದಾರರು ತಾಂತ್ರಿಕವಾಗಿ ಅರ್ಹತೆ ಹೊಂದಿರುವುದರಿಂದ ದಿನಾಂಕ: 02-12-2021 ರಂದು ಮುಖ್ಯ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ತಾಂತ್ರಿಕ ಮೌಲ್ಯಮಾಪನ ಸಮಿತಿ ಸಭೆಯಲ್ಲಿ ತಾಂತ್ರಿಕ ಬಿಡ್‌ಗೆ ಅನುಮೋದನೆ ನೀಡಿ ಆರ್ಥಿಕ ಬಿಡ್‌ನ್ನು ತೆರೆಯಲು ಅನುಮೋದನೆ ನೀಡಿರುವಂತೆ ದಿನಾಂಕ: 18-12-2021 ರಂದು ತೆರೆಯಲಾಗಿದ್ದು, ವಿವರಗಳು ಈ ಕೆಳಕಂಡಂತಿರುತ್ತವೆ ಎಂದು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಿಳಿಸಿರುತ್ತಾರೆ.

ಕ್ರ.ಸಂ	ತಾಂತ್ರಿಕ ಮೌಲ್ಯಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ (ರೂ. ಗಳಲ್ಲಿ)	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂ. ಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ ದರಗಳಿಗೆ ಹೋಲಿಸಿದಾಗ
1	Sri Vinay Kumar M (Vinay Enterprises)	100.00	96.12	1,03,33,353.00	7.50%
2	Sri Avanihaker Nagaraja Madhusudhan (Suraksha Electricals)			1,04,29,504.15	8.50%

ಸದರಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿರುವ ಎಲ್-1 ಗುತ್ತಿಗೆದಾರರಾದ ರವರೊಂದಿಗೆ ದರ ಸಂಧಾನ ಮಾಡಲಾಗಿದ್ದು, ದರ ಸಂಧಾನದ ನಂತರ ದರಗಳ ವಿವರ ಈ ಕೆಳಕಂಡಂತಿರುತ್ತದೆ ಎಂದು ಮುಖ್ಯ ಆಯುಕ್ತರು, ಬಿಬಿಎಂಪಿ ರವರು ತಿಳಿಸಿರುತ್ತಾರೆ.

ಕ್ರ.ಸಂ	ತಾಂತ್ರಿಕ ಮೌಲ್ಯಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)	2018-19ನೇ ಸಾಲಿನ ದರಗಳ ಪಟ್ಟಿಯಂತೆ ಟೆಂಡರ್‌ಗಿಟ್ಟ ಮೊತ್ತ (ರೂ.ಗಳಲ್ಲಿ)	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂ. ಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ ದರಗಳಿಗೆ ಶೇಕಡವಾರು	ದರ ಸಂಧಾನದ ನಂತರ ಗುತ್ತಿಗೆದಾರರು ಒಪ್ಪಿರುವ ಮೊತ್ತ	ದರಸಂಧಾನದ ನಂತರ ಶೇಕಡವಾರು
1	Sri Vinay Kumar M (Vinay Enterprises)	96.12	1,03,33,353.00	7.50%	1,00,90,519.20	4.97% ಹೆಚ್ಚು	ಎಲ್-1

ಎಲ್- ಗುತ್ತಿಗೆದಾರರಾದ Sri Vinay Kumar M (Vinay Enterprises) ರವರು ಮಂಜೂರಾತಿ ದರಗಳ ಮೇಲೆ ಶೇ.7.50% ಹೆಚ್ಚುವರಿಯಾಗಿದ್ದು, ಮುಖ್ಯ ಅಭಿಯಂತರರು ಯಲಹಂಕ ವಲಯ ರವರು ಗುತ್ತಿಗೆದಾರರೊಂದಿಗೆ ದರ ಸಂಧಾನ ನಡೆಸಿ, ದರ ಸಂಧಾನದ ನಂತರ ರೂ.1,00,90,519.20 ಗಳಾಗಿದ್ದು,

. . 3/-

ಮಂಜೂರಾತಿ ದರಗಳ ಮೇಲೆ (2018-19ನೇ ಸಾಲಿನ) ಶೇ.4.97% ರಷ್ಟು ಹೆಚ್ಚುವರಿಯಾಗಿರುತ್ತದೆ. ಅರ್ಥಿಕ ಮೌಲ್ಯಮಾಪನ ಸಮಿತಿ ಸಭೆಯಲ್ಲಿ ಶೇ.4.97% ರಷ್ಟು ಹೆಚ್ಚುವರಿ ಟೆಂಡರ್‌ಗೆ ಮಂಜೂರಾತಿ ನೀಡಲು ಸಮಿತಿಯಲ್ಲಿ ಶಿಫಾರಸ್ಸು ಮಾಡಲಾಗಿದ್ದು, ಮೇಲಿನ ಅಂಶಗಳ ಹಿನ್ನೆಲೆಯಲ್ಲಿ, ಕಾಮಗಾರಿಯ ಅಂದಾಜು ಮೊತ್ತ ರೂ.100.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಮತ್ತು ಕಡಿಮೆ ಮೊತ್ತದ ಟೆಂಡರ್‌ದಾರರಾದ Sri Vinay Kumar M (Vinay Enterprises) ರವರ ಸಂಧಾನಿತ ಟೆಂಡರ್‌ನ ಮೊತ್ತ ರೂ.1,00,90,519.20 ಶೇ.4.97% ರಷ್ಟು ಹೆಚ್ಚುವರಿ ದರಗಳಿಗೆ ಮಂಜೂರಾತಿಯನ್ನು ನೀಡುವಂತೆ ಬಿಬಿಎಂಪಿ ಮುಖ್ಯ ಆಯುಕ್ತರು ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 19-02-2022ರ ಸರ್ಕಾರದ ಪತ್ರದಲ್ಲಿ, ರೂ.10.00 ಕೋಟಿಗೆ ಕಡಿಮೆ ಇರುವ ಟೆಂಡರ್ ಆಹ್ವಾನಿಸಿದ್ದರೂ ಸದಾ ಸೂಕ್ತ ಕಾರಣವನ್ನು ನೀಡಿರುವುದಿಲ್ಲ. ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ಸಕಾರಣವಲ್ಲದ ಪ್ರಸ್ತಾವನೆಯನ್ನು ತಿರಸ್ಕರಿಸಲು ನಿರ್ಧರಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ರೂ.10.00 ಕೋಟಿಗಳಿಗಿಂತ ಕಡಿಮೆ ಇರುವ ಟೆಂಡರ್ ಆಹ್ವಾನಿಸಿರುವ ಬಗ್ಗೆ ಸ್ಪಷ್ಟ ಅಭಿಪ್ರಾಯ / ಸಮರ್ಥನೆಗಳನ್ನೊಳಗೊಂಡ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಬಿಬಿಎಂಪಿ ಮುಖ್ಯ ಆಯುಕ್ತರನ್ನು ಕೋರಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ದಿನಾಂಕ: 30-05-2022 / 07-06-2022ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು, ಸದರಿ ಕಾಮಗಾರಿಯು ವಿದ್ಯುತ್ ಕಾಮಗಾರಿಯಾಗಿದ್ದು, ಇತರೇ ಸಿವಿಲ್ ಕಾಮಗಾರಿಗಳೊಂದಿಗೆ ಪ್ಯಾಕೇಜ್ ಮಾಡಲು ಸಾಧ್ಯವಿರುವುದಿಲ್ಲ. ಈ ಕಾರಣದಿಂದ ಸದರಿ ಕಾಮಗಾರಿಗೆ ಪ್ರತ್ಯೇಕವಾಗಿ ಟೆಂಡರ್ ಕರೆಯಲಾಗಿದ್ದು, ಸಾರ್ವಜನಿಕ ಹಿತದೃಷ್ಟಿಯಿಂದ ಈಗಾಗಲೇ ದಿನಾಂಕ: 19-01-2022 ರಂದು ಸಲ್ಲಿಸಲಾಗಿರುವ ಟೆಂಡರ್‌ಗೆ ಅನುಮೋದನೆ ನೀಡುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ದಿನಾಂಕ: 08-07-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರ ದಿನಾಂಕ: 14-01-2022 / 19-01-2022 ಮತ್ತು 30-05-2022 / 07-06-2022ರ ಪ್ರಸ್ತಾವನೆಗಳನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ, ವಿಷಯವನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

> "ವಿವರವಾದ ಚರ್ಚೆಯ ನಂತರ Upgradation of Musical Fountain and other developmental works in Kempegowda Park in ward No. 04 of Yelahanka Satellite town sub Division ಪ್ಯಾಕೇಜಿನ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, Sri. Vinay Kumar M (Vinay Enterprises) ರವರ ಬಿಡ್ಡನ್ನು ಟೆಂಡರ್‌ಗಿಟ್ಟ ಮೊತ್ತವಾದ ರೂ.96,12,000.00 ಗಳಿಗೆ ಹೋಲಿಸಿದಾಗ +4.97% ಹೆಚ್ಚು ಇರುವ ಅಂದರೆ ರೂ.1,00,90,519.20ಗಳ ಸಂಧಾನಿತ ಮೊತ್ತಕ್ಕೆ ಅನುಮೋದಿಸಲು ಹಾಗೂ ರೂ.10 ಕೋಟಿಗಿಂತ ಕಡಿಮೆ ಇರುವ ಮೊತ್ತದ ಪ್ಯಾಕೇಜ್ ರೂಪಿಸಿ ಟೆಂಡರ್ ಕರೆದಿರುವ ಕ್ರಮವನ್ನು ಮುಖ್ಯ ಆಯುಕ್ತರು ಬಿಬಿಎಂಪಿ ರವರ ಲಿಖಿತ ವಿವರಣೆಯನ್ನು ಒಪ್ಪಿ ಸ್ಥಿರೀಕರಿಣಕ್ಕಾಗಿ ಮಾನ್ಯ ಮುಖ್ಯಮಂತ್ರಿಗಳ ಅನುಮೋದನೆಗೆ ಸಲ್ಲಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು."

ದಿನಾಂಕ: 08-07-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

. . .4/-

ಸರ್ಕಾರಿ ಆದೇಶ ಸಂಖ್ಯೆ: ನಅಇ 38 ಎಂಎಸ್‌ಪ್ಕೆ 2022,
ಬೆಂಗಳೂರು, ದಿನಾಂಕ: 30-08-2022.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎಸ್‌ಪ್ಕೆ 2018, ದಿನಾಂಕ: 20-09-2019ರಲ್ಲಿ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಕ್ರಿಯಾ ಯೋಜನೆಯ ಅನುಬಂಧ-6ರ ಕ್ರಮ ಸಂಖ್ಯೆ: 249ರ ಕಾಮಗಾರಿಯನ್ನೊಳಗೊಂಡು ಮಾಡಲಾಗಿರುವ "Upgradation of Musical Fountain and other developmental works in Kempegowda Park in ward No.04 of Yelahanka Satellite town sub Division" ಪ್ಯಾಕೇಜಿನ ರೂ.1.00 ಕೋಟಿಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 08-07-2022 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ, Sri Vinay Kumar M. (Vinay Enterprises) ರವರ ಬಿಡ್ಡನ್ನು ಟೆಂಡರ್‌ಗಿಟ್ಟು ಮೊತ್ತವಾದ ರೂ.96,12,000.00 ಗಳಿಗೆ ಹೋಲಿಸಿದಾಗ +4.97% ಹೆಚ್ಚು ಇರುವ ಅಂದರೆ ರೂ.1,00,90,519.20ಗಳ (ಒಂದು ಕೋಟಿ ತೊಂಭತ್ತು ಸಾವಿರದ ಐದುನೂರ ಹತ್ತೊಂಭತ್ತು ರೂಪಾಯಿಗಳು ಮತ್ತು ಇಪ್ಪತ್ತು ಪೈಸೆಗಳು ಮಾತ್ರ) ಗಳ ಸಂಧಾನಿತ ಟೆಂಡರ್‌ಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆಯನ್ನು ನೀಡಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಟೆಂಡರ್ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.
2. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.
3. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎಸ್‌ಪ್ಕೆ 2018, ದಿನಾಂಕ: 20-09-2019ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯ ಅನುದಾನದಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಅನ್ನು ಬಿಬಿಎಂಪಿಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.
6. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಮನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು, ಅನುಮೋದನೆ ಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
7. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
8. ದಿನಾಂಕ: 08-07-2022ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.
9. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಮ್ಮ ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.

. . 5/-

10. ರೂ.10.00 ಕೋಟಿಗಿಂತ ಕಡಿಮೆ ಪ್ಯಾಕೇಜ್‌ಗಳಲ್ಲಿನ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಸೂಕ್ತ ಸಮರ್ಥನೆ ಮತ್ತು ಸ್ಪಷ್ಟೀಕರಣಗಳನ್ನು ಪಡೆಯತಕ್ಕದ್ದು. ಇನ್ನು ಮುಂದೆ ಸೂಕ್ತ ಸಮರ್ಥನೆ ಇಲ್ಲದೆ ರೂ.10.00 ಕೋಟಿಗಿಂತ ಕಡಿಮೆ ಪ್ಯಾಕೇಜ್‌ಗಳಲ್ಲಿ ಕಾಮಗಾರಿಗಳನ್ನು ಪ್ರಸ್ತಾಪಿಸದಂತೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಎನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಜೆಟ್ಟುವರಿ ಪ್ರತಿಗಳು.